Akashvani: Bangalore
Regional Bulletin In Kannada
19.08.2025 : 14.30hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು:

- ಪರಿಶಿಷ್ಟ ಜಾತಿಯ ಒಳಮೀಸಲಾತಿ ವರದಿ ಚರ್ಚಿಸಲು ಇಂದು ವಿಶೇಷ ಸಂಪುಟ ಸಭೆ
- ರಾಜ್ಯದ ೮ ಸಕ್ಕರೆ ಕಾರ್ಖಾನೆಗಳು ೩೦ ವರ್ಷ ಭೋಗ್ಯಕ್ಕೆ - ಸಚಿವ ಶಿವಾನಂದ ಪಾಟೀಲ್ ಮೇಲ್ಮನೆಯಲ್ಲಿ ಸ್ಪಷ್ಟನೆ
- ೨೦೨೫ನೇ ಸಾಲಿನ ಗ್ರೇಟರ್ ಬೆಂಗಳೂರು ಆಡಳಿತ ತಿದ್ದುಪಡಿ ಸೇರಿದಂತೆ ಹಲವು ವಿಧೇಯಕಗಳಿಗೆ ವಿಧಾನಸಭೆಯಲ್ಲಿಂದು ಅಂಗೀಕಾರ
- ರಾಜ್ಯದ ಹಲವೆಡೆ ಧಾರಾಕಾರ ಮಳೆ; ಹಲವು ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಘೋಷಣೆ

*******

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿಂದು ವಿಶೇಷ ಸಂಪುಟ ಸಭೆ ನಡೆಯಲಿದೆ. ಸಭೆಯಲ್ಲಿ ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ನೀಡುವ ಬಗ್ಗೆ ನ್ಯಾಯಮೂರ್ತಿ ನಾಗಮೋಹನ್ ದಾಸ್ ಏಕಸದಸ್ಯ ಆಯೋಗ ಸಲ್ಲಿಸಿರುವ ವರದಿ ಕುರಿತಂತೆ ಚರ್ಚೆ ನಡೆಯಲಿದೆ. ಪರಿಶಿಷ್ಟರ ಎಡಗೈ ಹಾಗೂ ಬಲಗೈ ಸಮುದಾಯದ ಸಚಿವರಲ್ಲಿ ವರದಿ ಬಗ್ಗೆ ಒಮ್ಮತ ಮೂಡದಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಚಿವರ ಅಭಿಪ್ರಾಯ ಪಡೆಯಲಿದ್ದಾರೆ. ಬಳಿಕ ಸರ್ಕಾರ ಅಂತಿಮ ನಿರ್ಧಾರಕ್ಕೆ ಬರಲಿದೆ.

*******

ರಾಜ್ಯದ ೮ ಸಕ್ಕರೆ ಕಾರ್ಖಾನೆಗಳನ್ನು ೩೦ ವರ್ಷಗಳ ಅವಧಿಗೆ ನಿಯಮಬದ್ಧವಾಗಿಯೇ ಭೋಗ್ಯಕ್ಕೆ ನೀಡಲಾಗಿದೆ ಎಂದು ಸಕ್ಕರೆ ಸಚಿವ ಶಿವಾನಂದಪಾಟೀಲ್ ಮೇಲ್ಮನೆಯಲ್ಲಿ ಸ್ಪಷ್ಟಪಡಿಸಿದ್ದಾರೆ. ಸದಸ್ಯ ಎನ್.ರವಿಕುಮಾರ್ ಪ್ರಶ್ನೆಗೆ ಉತ್ತರಿಸಿದ ಅವರು, ೮ ಸಕ್ಕರೆ ಕಾರ್ಖಾನೆಗಳನ್ನು ೩೭೧ ಕೋಟಿ ರೂಪಾಯಿ ಭೋಗ್ಯಕ್ಕೆ ೩೦ ವರ್ಷಗಳ ಅವಧಿಗೆ ನೀಡಲಾಗಿದೆ. ಅವಧಿ ಮುಗಿದ ನಂತರ ಕಾರ್ಖಾನೆಗಳನ್ನು ಸರ್ಕಾರಕ್ಕೆ ಹಸ್ತಾಂತರ ಮಾಡಲಿದ್ದಾರೆ ಎಂದು ತಿಳಿಸಿದ್ದಾರೆ. ಮೈಶುಗರ್

ಸಕ್ಕರೆ ಕಾರ್ಖಾನೆಗೆ ಅನುದಾನ ದುರ್ಬಳಕೆ ಕುರಿತಂತೆ ತನಿಖೆ ನಡೆಸಲಾಗುವುದು ಎಂದ ಅವರು, ಪಿಎಂ-ಮಿತ್ರ ಜವಳಿ ಪಾರ್ಕ್ ಯೋಜನೆಯನ್ನು ಕಲಬುರಗಿಯಲ್ಲಿ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಯಾವುದೇ ಕಾರಣಕ್ಕೂ ಬಾಗಲಕೋಟೆಯಲ್ಲಿರುವ ಕೃಷಿ ವಿಶ್ವ ವಿದ್ಯಾನಿಲಯವನ್ನು ಮುಚ್ಚುವುದಾಗಲೀ ಇಲ್ಲವೇ ಬೇರೆ ವಿಶ್ವವಿದ್ಯಾಲಯಕ್ಕೆ ವಿಲೀನವಾಗಲೀ ಮಾಡುವುದಿಲ್ಲ ಎಂದು ಕೃಷಿ ಸಚಿವ ಚಲುವರಾಯಸ್ವಾಮಿ ಸ್ಪಷ್ಟಪಡಿಸಿದ್ದಾರೆ. ರಾಜ್ಯಾದ್ಯಂತ ಅಕ್ರಮ ಮರಳುಗಾರಿಕೆ ತಡೆಗಟ್ಟಲು ಜಿಪಿಎಸ್ ಅಳವಡಿಕೆ ಹಾಗೂ ಸ್ಕ್ವಾಡ್ ತಂಡವನ್ನು ಇನ್ನಷ್ಟು ಕಠಿಣಗೊಳಿಸಲಾಗುವುದು ಎಂದು ಸಚಿವ ಚಲುವರಾಯಸ್ವಾಮಿ ಇದೇ ಸಂದರ್ಭದಲ್ಲಿ ತಿಳಿಸಿದ್ದಾರೆ. ಸದಸ್ಯೆ ಹೇಮಾಲತಾ ನಾಯಕ್ ತೋಟಗಾರಿಕೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಅವರಿಗೆ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಅಕ್ರಮ ಮರಳುಗಾರಿಕೆ ತಡೆಗಟ್ಟುವುದು ಸರ್ಕಾರದ ಮೊದಲ ಆದ್ಯತೆಯಾಗಿದೆ ಎಂದು ಹೇಳಿದ್ದಾರೆ.

**********

ವಿಧಾನಸಭೆಯಲ್ಲಿಂದು ಗಿಗ್ ಕಾರ್ಮಿಕರ ವಿಮಾ ಸೌಲಭ್ಯ ನೀಡುವ ೨೦೨೫ನೇ ಸಾಲಿನ ಕರ್ನಾಟಕ ವೇದಿಕೆ ಆಧಾರಿತ ಗಿಗ್ ಕಾರ್ಮಿಕರ ವಿಧೇಯಕ ಸೇರಿದಂತೆ ಹಲವು ವಿಧೇಯಕಗಳಿಗೆ ಅನುಮೋದನೆ ದೊರೆತಿದೆ. ಕಾರ್ಮಿಕ ಸಚಿವ ಸಂತೋಷ ಲಾಡ್ ೨೦೨೫ನೇ ಸಾಲಿನ ಕರ್ನಾಟಕ ವೇದಿಕೆ ಆಧಾರಿತ ಗಿಗ್ ಕಾರ್ಮಿಕರ ವಿಧೇಯಕ, ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ, ೨೦೨೫ನೇ ಸಾಲಿನ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ (ತಿದ್ದುಪಡಿ) ವಿಧೇಯಕವನ್ನು ಮಂಡಿಸಿದರು. ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬಿ.ಎಸ್.ಸುರೇಶ್, ೨೦೨೫ನೇ ಸಾಲಿನ ಕರ್ನಾಟಕ ನಗರ ಪಾಲಿಕೆಗಳ (ತಿದ್ದುಪಡಿ) ವಿಧೇಯಕ,

ಮೀನುಗಾರಿಕಾ ಸಚಿವ ಮಂಕಾಳ ಎಸ್. ವೈದ್ಯ, ೨೦೨೫ನೇ ಸಾಲಿನ ಕರ್ನಾಟಕ ಬಂದರುಗಳ ವಿಧೇಯಕವನ್ನು ಮಂಡಿಸಿದರು. ಈ ವೇಳೆ ಪ್ರತಿಪಕ್ಷ ಸದಸ್ಯರ ಸಲಹೆಗಳನ್ನು ಪಡೆದ ಸಚಿವರು, ಕೆಲ ಬದಲಾವಣೆ ಮಾಡುವ ಭರವಸೆ ನೀಡಿದರು.ಬಳಿಕ ಸಭಾಧ್ಯಕ್ಷ ಯು.ಟಿ. ಖಾದರ್, ಧ್ವನಿಮತದ ಮೂಲಕ ಈ ವಿಧೇಯಕಗಳನ್ನು ಅಂಗೀಕರಿಸಲಾಗಿದೆ ಎಂದು ಪ್ರಕಟಿಸಿದರು.

**********

ಗ್ರೇಟರ್ ಬೆಂಗಳೂರು ಪ್ರದೇಶದ ವ್ಯಾಪ್ತಿಯಲ್ಲಿ ಐದು ನಗರ ಪಾಲಿಕೆಗಳನ್ನು ರಚಿಸಿ ಗಡಿ ಗುರುತಿಸಿರುವ ರಾಜ್ಯ ಸರ್ಕಾರ, ಶೀಘ್ರವಾಗಿ ಚುನಾವಣೆ ನಡೆಸಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ವಿಧಾನಸಭೆಯಲ್ಲಿಂದು ಶಾಸನ ರಚನೆ ಕಲಾಪದಲ್ಲಿ ೨೦೨೫ನೇ ಸಾಲಿನ ಗ್ರೇಟರ್ ಬೆಂಗಳೂರು ಆಡಳಿತ (ತಿದ್ದುಪಡಿ) ವಿಧೇಯಕವನ್ನು ಮಂಡಿಸಿದರು. ಬಳಿಕ ಮಾತನಾಡಿದ ಅವರು, ಪಾಲಿಕೆ ವ್ಯಾಪ್ತಿಯಲ್ಲಿ ಸರ್ಕಾರದ ಹಸ್ತಕ್ಷೇಪ ಇಲ್ಲ ಎಂಬ ಸ್ಪಷ್ಟನೆಗೆ ತಿದ್ದುಪಡಿ ತರಲಾಗಿದೆ ಎಂದು ತಿಳಿಸಿದರು. ಈ ವೇಳೆ ಮಧ್ಯಪ್ರವೇಶಿಸಿದ ಬಿಜೆಪಿಯ ಅಶ್ವಥ್ ನಾರಾಯಣ್, ಸಿಟಿ ಕಾರ್ಪೋರೇಷನ್ ಗಳನ್ನು ಹೇಗೆ ಸೇರಿಸ್ತಿದ್ದೀರಾ ಎಂದು ಪ್ರಶ್ನಿಸಿದರು. ಇಲ್ಲಿ ಪೂರ್ಣ ಸ್ವರಾಜ್ಯದ ಕಲ್ಪನೆ ಮಾಯ ಆಗಿದ್ದು, ಇದು ಸ್ವಾಯತ್ತ ಸಂಸ್ಥೆಗಳ ಅವನತಿಗೆ ಕಾರಣ ಎಂದು ಟೀಕಿಸಿದರು.ಇದಕ್ಕೆ ದನಿಗೂಡಿಸಿದ ವಿಪಕ್ಷ ನಾಯಕ ಆರ್.ಅಶೋಕ, ಗ್ರೇಟರ್ ಬೆಂಗಳೂರು ಎನ್ನುವುದು ಸರಿಯಲ್ಲ. ಸರ್ಕಾರಕ್ಕೆ ಕನ್ನಡದ ಹೆಸರೇ ಸಿಗಲಿಲ್ಲವೇ ಎಂದು ಕೇಳಿದರು. ಬಳಿಕ ಸದಸ್ಯರಾದ ರಿಜ್ವಾನ್ ಆರ್ಶದ್, ಸೋಮಶೇಖರ್, ಸತೀಶ್, ಮುನಿರಾಜು, ರಾಮಮೂರ್ತಿ ಸೇರಿದಂತೆ ಹಲವರು, ಜಿಬಿಎ ವಿಧೇಯಕ ಕುರಿತು ಮಾತನಾಡಿದರು. ಬಳಿಕ ಸಭಾಧ್ಯಕ್ಷ ಯು.ಟಿ. ಖಾದರ್ ಅವರು, ಧ್ವನಿಮತದ ಮೂಲಕ ಈ ವಿಧೇಯಕ ಅಂಗೀಕರಿಸಲಾಗಿದೆ ಎಂದು ಪ್ರಕಟಿಸಿದರು.

**********

ಸಹಕಾರಿ ಬ್ಯಾಂಕ್, ಸಂಸ್ಥೆಗಳಲ್ಲಿ ವಂಚನೆ ತಡೆಗಟ್ಟುವ, ಬಡ್ಡಿ ನಿಗದಿ ಹಾಗೂ ಆರ್ಥಿಕ ಬಲ ನೀಡುವ ಅಂಶಯುಳ್ಳ ೨೦೨೫ನೇ ಸಾಲಿನ ಕರ್ನಾಟಕ ಸೌಹಾರ್ದ ಸಹಕಾರಿ (ತಿದ್ದುಪಡಿ) ವಿಧೇಯಕಕ್ಕೆ ವಿಧಾನಸಭೆಯಲ್ಲಿ ಅಂಗೀಕಾರ ದೊರೆತಿದೆ. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ.ಪಾಟೀಲ್ ಮಂಡಿಸಿದರು. ಪರ ವಿರೋಧದ ಬಳಿಕ ಸಭಾಧ್ಯಕ್ಷ ಯು.ಟಿ. ಖಾದರ್ ಅವರು, ಧ್ವನಿಮತದ ಮೂಲಕ ಈ ವಿಧೇಯಕ ಅಂಗೀಕರಿಸಲಾಗಿದೆ ಎಂದು ಪ್ರಕಟಿಸಿದರು.

**********

ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಕೇವಲ ನಾಲ್ಕು ದಿನಗಳಲ್ಲಿ ೫ ಲಕ್ಷಕ್ಕೂ ಹೆಚ್ಚು ಫಾಸ್ಟ್ ಟ್ಯಾಗ್ ಆಧಾರಿತ ವಾರ್ಷಿಕ ಟೋಲ್ ಪರ್ಮಿಟ್ ಮಾರಾಟ ಮಾಡಿದ್ದು, ೧೫೦ ಕೋಟಿ ರೂಪಾಯಿ ಆದಾಯ ಸಂಗ್ರಹಿಸಿದೆ. ತಮಿಳುನಾಡು ಅತಿ ಹೆಚ್ಚು ವಾರ್ಷಿಕ ಪಾಸ್‌ಗಳ ಖರೀದಿ ದಾಖಲಿಸಿದ್ದು, ನಂತರದ ಸ್ಥಾನ ಕರ್ನಾಟಕ ಪಡೆದುಕೊಂಡಿದೆ.

**********

ರಾಜ್ಯದ ಕರಾವಳಿ ಮತ್ತು ಒಳನಾಡಿನ ಹಲವು ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಿಂದ ಜನಜೀವನ ಅಸ್ತವ್ಯಸ್ತಗೊಂಡಿದೆ. ಬಂಗಾಳಕೊಲ್ಲಿಯಲ್ಲಿ ವಾಯುಭಾರ ಕುಸಿತದ ಪರಿಣಾಮ ಉಂಟಾಗಿರುವ ಹವಾಮಾನ ವೈಪರೀತ್ಯದಿಂದ ಕೆಲ ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಘೋಷಣೆ ಮಾಡಲಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ದಿನವಿಡಿ ವ್ಯಾಪಕ ಮಳೆ ನಿರೀಕ್ಷೆ ಇರುವುದರಿಂದ ಮೀನುಗಾರರು ಮತ್ತು ಪ್ರವಾಸಿಗರು ಸಮುದ್ರ ಹಾಗೂ ನದಿ ತೀರಗಳಿಂದ ದೂರ ಉಳಿಯುವಂತೆ ಸೂಚಿಸಿದೆ. ಉತ್ತರಕನ್ನಡ ಜಿಲ್ಲೆಯ ಕರಾವಳಿ ಹಾಗೂ ಮಲೆನಾಡಿನಲ್ಲಿ ಇಂದೂ ಸಹ ಮಳೆ ಮುಂದುವರೆದಿದೆ.

ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ, ಭಟ್ಕಳ, ಶಿರಸಿ, ಸಿದ್ದಾಪುರ, ಯಲ್ಲಾಪುರ, ಜೊಯಿಡಾ, ಹಳಿಯಾಳ ಹಾಗೂ ದಾಂಡೇಲಿ ಸೇರಿದಂತೆ ಒಟ್ಟು ಹನ್ನೊಂದು ತಾಲೂಕುಗಳ ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಗದಗ ಜಿಲ್ಲೆಯಲ್ಲಿ ಮಳೆ ಸುರಿಯುತ್ತಿರುವ ಹಿನ್ನೆಲೆಯಲ್ಲಿ ಶಾಲಾ ಮಕ್ಕಳ ಆರೋಗ್ಯದ ಹಿತದೃಷ್ಟಿಯಿಂದ ಜಿಲ್ಲೆಯ ಎಲ್ಲಾ ಅಂಗನವಾಡಿ, ಪ್ರಾಥಮಿಕ, ಪ್ರೌಢ ಶಾಲೆಗಳು ಹಾಗೂ ಕಾಲೇಜುಗಳಿಗೆ ರಜೆ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಪಶ್ಚಿಮಘಟ್ಟ ಪ್ರದೇಶ ಹಾಗೂ ಬೆಳಗಾವಿ ಜಿಲ್ಲೆಯಲ್ಲಿ ಮಳೆ ಮುಂದುವರೆದಿದ್ದು, ಕಳೆದ ೨೪ಗಂಟೆಗಳಲ್ಲಿ ಜಿಲ್ಲೆಯಲ್ಲಿ ೧೮ಮಿಲಿ ಮೀಟರ್ ಮಳೆ ಆಗಿದೆ. ಗ್ರಾಮೀಣ ಭಾಗದಲ್ಲಿ ನಿರಂತರ ಮಳೆಯಿಂದ ಕೊಯ್ಲಿಗೆ ಬಂದಿರೋ ಹೆಸರು, ಮೆಕ್ಕೆಜೋಳ, ಸೋಯಾಬಿನ್, ಈರುಳ್ಳಿ, ಭತ್ತದ ಬೆಳೆಗಳು ಜಲಾವೃತಗೊಂಡಿವೆ. ಮಲಪ್ರಭಾ, ಘಟಪ್ರಭಾ ನದಿತೀರದಲ್ಲಿ ಕಟ್ಟೆಚ್ಚರ ವಹಿಸಲಾಗಿದೆ. ದಾವಣಗೆರೆ ಜಿಲ್ಲಾದ್ಯಂತ ವ್ಯಾಪಕ ಮಳೆ ಮಂದುವರಿದಿದ್ದು ತುಂಗಭದ್ರಾ ನದಿ ಪಾತ್ರದಲ್ಲಿ ಪ್ರವಾಹ ಭೀತಿ ಎದುರಾಗಿದೆ. ಈ ಹಿನ್ನೆಲೆಯಲ್ಲಿ ನದಿ ಪಾತ್ರದ ಕೆಲ ಗ್ರಾಮಗಳಲ್ಲಿ ನಿಷೇದಾಜ್ಞೆ ಜಾರಿಗೊಳಿಸಲಾಗಿದೆ. ಕೊಡಗು ಜಿಲ್ಲೆಯಲ್ಲಿ ಇಂದು

ಮಳೆ ಬಿಡುವು ನೀಡಿದೆ. ಮಡಿಕೇರಿ ಸೇರಿದಂತೆ ಜಿಲ್ಲೆಯ ಬಹುತೇಕ ಕಡೆ ಅನೇಕ ದಿನಗಳಿಂದ ಸುರಿಯುತ್ತಿದ್ದ ಮಳೆ ಇಂದು ಇಳಿಮುಖವಾಗಿದೆ.

**********

ರಾಜ್ಯದ ವಿವಿಧೆಡೆ ಹಣಕಾಸು ಸಾಕ್ಷರತಾ ಅಭಿಯಾನ ಯಶಸ್ವಿಯಾಗಿ ನಡೆಯುತ್ತಿದೆ. ಕೊಪ್ಪಳದ ಗಂಗಾವತಿಯ ಹುಲಿಹೈದರ್ ಗ್ರಾಮ ಪಂಚಾಯಿತಿಯಲ್ಲಿ ನಡೆದ ಅಭಿಯಾನದಲ್ಲಿ ಮುದ್ರಾ, ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆ ಸೇರಿದಂತೆ ಹಲವು ಯೋಜನೆಗಳ ಬಗ್ಗೆ ಮಾಹಿತಿ ನೀಡಲಾಯಿತು. ವಿಜಯಪುರದ ಹೊನ್ನಟಗಿಯಲ್ಲಿ ನಡೆದ ಜನಸುರಕ್ಷಾ ಶಿಬಿರದಲ್ಲಿ ಡಿಜಿಟಲ್ ಬ್ಯಾಂಕಿಂಗ್ ಹಾಗೂ ನಿಯಮಿತ ಸಾಲ ಮರುಪಾವತಿ ಬಗ್ಗೆ ಜಾಗೃತಿ ಮೂಡಿಸಲಾಯಿತು.

ದಕ್ಷಿಣ ಕನ್ನಡ ಜಿಲ್ಲೆಯ ಪಡುಪಣಂಬೂರಿನಲ್ಲಿ ನಡೆದ ಜನಸುರಕ್ಷಾ ಶಿಬಿರದಲ್ಲಿ ಇ-ಕೆವೈಸಿ ಸೇರಿದಂತೆ ಜನಸುರಕ್ಷಾ ಯೋಜನೆಗಳ ಕುರಿತು ಗ್ರಾಹಕರಿಗೆ ಮಾಹಿತಿ ನೀಡಲಾಯಿತು.

**********

ವಿಜಯಪುರ ಜಿಲ್ಲೆಯಲ್ಲಿರುವ ಎಲ್ಲಾ ಸರಕಾರಿ ವಸತಿ ನಿಲಯಗಳ ನಿರ್ವಹಣೆ, ವಿದ್ಯಾರ್ಥಿಗಳ ಕಲ್ಯಾಣ ಮೂಲಸೌಕರ್ಯಗಳ ಸುಧಾರಣೆ ಹಾಗೂ ಇತರೆ ಚಟುವಟಿಕೆಗಳಿಗಾಗಿ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಹಾಸ್ಟೆಲ್ ನಿಯೋಜಕರನ್ನಾಗಿ ಜಿಲ್ಲಾಧಿಕಾರಿ ಡಾ.ಆನಂದ ನೇಮಕ ಮಾಡಿದ್ದಾರೆ. ಇವರು ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ, ವೈಯಕ್ತಿಕ ಹಾಗೂ ವೃತ್ತಿ ಜೀವನದ ಬೆಳವಣಿಗೆಗೆ ಮಾರ್ಗದರ್ಶನ ನೀಡಲು ವಿನೂತನ ಕಾರ್ಯಕ್ರಮಗಳನ್ನು ಆಯೋಜಿಸುವುದು, ಪ್ರತಿವಾರ ಕನಿಷ್ಠ ಒಂದು ಬಾರಿ ವಸತಿ ನಿಲಯಗಳಿಗೆ ಭೇಟಿ ನೀಡುವುದು, ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸುವ ಮೂಲಕ ಪರೀಕ್ಷಾ ಸಿದ್ಧತೆಗೆ ಮನೋಸ್ಥೈರ್ಯ ತುಂಬಲಿದ್ದಾರೆ.

**********

ಅಟಲ್‌ಜೀ ಜನಸ್ನೇಹಿ ಕೇಂದ್ರ ಯೋಜನೆಯಡಿಯಲ್ಲಿ ಸಾರ್ವಜನಿಕರಿಗೆ ವಿವಿಧ ಪ್ರಮಾಣ ಪತ್ರಗಳ ಸೇವೆಯನ್ನು ಶೇಕಡ ೯೯.೯೨ ರಷ್ಟು ನೀಡಿ, ವಿಜಯನಗರ ಜಿಲ್ಲೆ ರಾಜ್ಯದಲ್ಲಿ ದ್ವಿತೀಯ ಸ್ಥಾನ ಪಡೆದಿದೆ ಎಂದು ಜಿಲ್ಲಾಧಿಕಾರಿ ಎಂ.ಎಸ್. ದಿವಾಕರ್ ಸಂತಸ ವ್ಯಕ್ತಪಡಿಸಿದ್ದಾರೆ. ಜಿಲ್ಲೆಗೆ ಸಂಬಂಧಿಸಿದಂತೆ ೨೦೨೫ರ ಜುಲೈ ತಿಂಗಳಲ್ಲಿ ಸ್ವೀಕರಿಸಲಾಗಿದ್ದ ಒಟ್ಟು ೩೬ ಸಾವಿರದ ೪೨

ಅರ್ಜಿಗಳನ್ನು ನಿಗದಿತ ಅವಧಿಗಿಂತ ಮೊದಲೇ ಶೇಕಡ ೯೯.೯೨ರಷ್ಟು ವಿಲೇವಾರಿ ಮಾಡಿ ೬.೩ ಸಿಗ್ಮಾ ಮೌಲ್ಯವನ್ನು ಪಡೆಯಲಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಸಂಬಂಧಿಸಿದ ಕಂದಾಯ ಇಲಾಖೆಯ ಅಧಿಕಾರಿಗಳ ಕಾರ್ಯಕ್ಕೆ ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಇದೇ ರೀತಿ ಸಾರ್ವಜನಿಕರಿಗೆ ಉತ್ತಮ ಸೇವೆ ಒದಗಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

*****END*****